ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು – 560 001

ಸಂಖ್ಯೆ:ಕಾಶಿಇ/ಶೈವಿ/108/ಜಾ.ಕೈ.ತೊ.ದಿನ/2023-24 ದಿನಾಂಕ:12.10.2023.

## ಸುತ್ತೋಲೆ

**ವಿಷಯ:** ದಿನಾಂಕ:16.10.2023 ರಂದು "ಜಾಗತಿಕ ಕೈ-ತೊಳೆಯುವ ದಿನ" ವನ್ನು ಆಚರಿಸುವ ಕುರಿತು.

**ಉಲ್ಲೇಖ:** ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ರವರ ಪತ್ರ ಸಂಖ್ಯೆ:KPRC-ADM2/171/2023-DD2 dt:11.10.2023.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಯುನಿಸೆಫ್ ಸಹಯೋಗದೊಂದಿಗೆ ದಿನಾಂಕ:16.10.2023 ರಂದು ಬೆಳಿಗ್ಗೆ 11.00 ಗಂಟೆಯಿಂದ ಅಪರಾಹ್ನ 12.30 ರವರೆಗೆ "ಜಾಗತಿಕ ಕೈ-ತೊಳೆಯುವ ದಿನ"ದ ಅಂಗವಾಗಿ "ಸ್ವಚ್ಛ ಕೈಗಳು:ಸುಸ್ಥಿರ ಅಭಿವೃದ್ಧಿಗೆ ಒಂದು ಕೀಲಿ" ಎಂಬ ಶೀರ್ಷಿಕೆಯೊಂದಿಗೆ ಪ್ಯಾನಲ್ ಚರ್ಚೆಯನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇಲ್ಲಿ ಆಯೋಜಿಸಲಾಗಿದ್ದು, ಯೂಟ್ಯೂಬ್ ಲೈವ್ ಮೂಲಕ ನೇರ ಪ್ರಸಾರ ಮಾಡಲಾಗುವುದು ಎಂದು ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿರುತ್ತದೆ.

ಪ್ಯಾನಲ್ ಚರ್ಚೆಯು ನಮ್ಮ ಕೈಗಳನ್ನು ಸಾಬೂನಿನಿಂದ ತೊಳೆಯುವುದರ ಪ್ರಾಮುಖ್ಯತೆ, ರೋಗಗಳನ್ನು ತಡೆಗಟ್ಟಲು ಮತ್ತು ಜೀವಗಳನ್ನು ಉಳಿಸುವ ನಿಟ್ಟಿನಲ್ಲಿ ಕೈತೊಳೆಯುವ ಕ್ರಮದ ಮಹತ್ವದ ಬಗ್ಗೆ ಅರಿವು ಮತ್ತು ತಿಳುವಳಿಕೆಯನ್ನು ಮೂಡಿಸುವ ಗುರಿಯೊಂದಿಗೆ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗುತ್ತಿದೆ. ಈ ಕಾರ್ಯಕ್ರಮವು ಗ್ರಾಮೀಣ ಪ್ರದೇಶದ ನಾಗರೀಕರು, ಮಹಿಳೆಯರು, ಕಾಲೇಜಿನ ವಿದ್ಯಾರ್ಥಿ-ವಿದ್ಯಾರ್ಥಿನಿಯರು, ವಿವಿಧ ಇಲಾಖೆಗಳ ಸರ್ಕಾರಿ ಅಧಿಕಾರಿಗಳು ಮತ್ತು ಸಾರ್ವಜನಿಕರಲ್ಲಿ ಕೈತೊಳೆಯುವ ಮಹತ್ವದ ಕುರಿತು ಜಾಗೃತಿ ಮೂಡಿಸುವಲ್ಲಿ ಸಹಾಯ ಮಾಡುತ್ತದೆ.

**ತತ್ಸಂಬಂಧವಾಗಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಬೋಧಕ, ಬೋಧಕೇತರರುಗಳು, ವಿದ್ಯಾರ್ಥಿಗಳು ಹಾಗೂ ಇಲಾಖೆಯ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರುಗಳು ಕಾರ್ಯಕ್ರಮದಲ್ಲಿ ಭಾಗವಹಿಸಲು ದಿನಾಂಕ:16.10.2023 ರಂದು ಬೆಳಿಗ್ಗೆ 11 ಗಂಟೆಯಿಂದ 12.30 ಗಂಟೆಯವರೆಗೆ ಸ್ವಚ್ಛ ಕೈಗಳು: ಸುಸ್ಥಿರ ಅಭಿವೃದ್ಧಿಗೆ ಒಂದು ಕೀಲಿ ಎಂಬ ಕಾರ್ಯಕ್ರಮದ ಶೀರ್ಷಿಕೆಯನ್ನು ANSSIRD & PR ಯೂಟ್ಯೂಬ್ ನಲ್ಲಿ ವೀಕ್ಷಿಸುವುದು.**

Youtube link: https://www.youtube.com/live/2Ajg6RsDip4?si=saAdEAWQBpqHpZOn

ಕಾರ್ಯಕ್ರಮದ ಬಳಿಕ ಭಾಗವಹಿಸಿದವರ ಸಂಖ್ಯೆ ಹಾಗೂ ಮಾಹಿತಿಯನ್ನು ಈ ಕೆಳಗೆ ನೀಡಲಾದ ಲಿಂಕ್‌ನಲ್ಲಿ ತಪ್ಪದೇ ನಮೂದಿಸುವುದು.
ಲಿಂಕ್: https://forms.gle/sH2voFjWKFRCvzzM9

ಈ ಮಹತ್ವದ ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನದಲ್ಲಿ ಇಲಾಖಾ ವ್ಯಾಪ್ತಿಯಲ್ಲಿ ಬರುವ ಮೇಲಿನ ಎಲ್ಲಾ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ತಪ್ಪದೇ ಭಾಗವಹಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಸೂಚಿಸಲಾಗಿದೆ.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ: - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ**

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

**ಪ್ರತಿಯನ್ನು:**

1. ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಾಳಿದಾಸ ರಸ್ತೆ, ಕೆ.ಜಿ.ರೋಡ್ ಜಂಕ್ಷನ್, ಗಾಂಧಿನಗರ, ಬೆಂಗಳೂರು-560 009.
2. ಕಛೇರಿ ಪ್ರತಿ.